ಅ) ಈಗಲಾದರೂ ಮೊದಲಿನಂತೆ ಸಣ್ಣ ನೀರಾವರಿ ಉಪವಿಭಾಗ ಸೇಡಂನಲ್ಲಿ ಪ್ರಾರಂಭ ಮಾಡಿ ಚಿಂಚೋಳಿ, ಚಿತ್ತಾಪೂರ ಹಾಗೂ ಸೇಡಂ ತಾಲ್ಲೂಕುಗಳಲ್ಲಿರುವ ಕೆರೆಗಳ ಹಾಗೂ ಅಣೆಕಟ್ಟೆಗಳ ನಿರ್ವಹಣೆಗಾಗಿ ಕ್ರಮ ಕೈಗೊಳ್ಳಲಾಗುವುದೆ; ಹಾಗಿದ್ದಲ್ಲಿ ಯಾವಾಗ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನಲ್ಲಿ ಸಣ್ಣ ನೀರಾವರಿ ಉಪ ವಿಭಾಗವನ್ನು ಪುನಃ ಪ್ರಾರಂಭ ಮಾಡುವ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರದ ಮಟ್ಟದಲ್ಲಿ ಪರಿಶೀಲಿಸಿ, ಆಡಳಿತಾತ್ಮಕ ದೃಷ್ಟಿಯಿಂದ ಸೇಡಂ ತಾಲ್ಲೂಕನ್ನು ಚಿಂಚೋಳಿ ಸಣ್ಣ ನೀರಾವರಿ ಉಪ ವಿಭಾಗದ ವ್ಯಾಪ್ತಿಯಲ್ಲಿಯೇ ಮುಂದುರಿಸಲು ನಿರ್ಧರಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.

ನೂರು ಎಕರೆಗಳಿಗಿಂತ ಹೆಚ್ಚು ನೀರಾವರಿಯಾಗುವ ಕೆರೆಗಳು ಅಣೆಕಟ್ಟೆಗಳನ್ನು ಸಣ್ಣ ನೀರಾವರಿ ವ್ಯಾಪ್ತಿಯಲ್ಲಿ ತೆಗೆದುಕೊಳ್ಳುವುದು

296(329) - ಶ್ರೀ ಬಸವಂತರೆಡ್ಡಿ ಮೊತಕಪಲ್ಲಿ (ಸೇಡಂ): ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸರ್ಕಾರದ ಆದೇಶ ಸಂ: ಸನೀಇ 156 ಕೆಜಿದು 2001 ದಿನಾಂಕ:23-3-2001 ರ ಮೇರೆಗೆ ಗುಲ್ಬರ್ಗಾ ಜಿಲ್ಲೆಯ ಸೇಡಂ ತಾಲ್ಲೂಕಿನ ಕೆರೆಗಳು, ಅಣೆಕಟ್ಟುಗಳು ನೂರು ಎಕರೆಗಳಿಗಿಂತ ಹೆಚ್ಚು ನೀರಾವರಿ ಮಾಡುವ ಸಾಮರ್ಥ್ಯ ಹೊಂದಿದ್ದು ಇವುಗಳನ್ನು ಸಣ್ಣ ನೀರಾವರಿ ವ್ಯಾಪ್ತಿಗೆ ತೆಗೆದುಕೊಳ್ಳಲು ಜರುಗಿಸಿರುವ ಕ್ರಮವೇನು;

ಆ) ಸರ್ಕಾರದ ಆದೇಶದಂತೆ, ಕೂಡಲೇ ಕೆರೆ ಅಣೆಕಟ್ಟೆಗಳನ್ನು ಸಣ್ಣ ನೀರಾವರಿ ವ್ಯಾಪ್ತಿಗೆ ತೆಗೆದುಕೊಂಡು ದುರಸ್ತಿ ಮಾಡಿ ರೈತರಿಗೆ ಅನುಕೂಲ ಮಾಡಿಕೊಡುವುದು ಯಾವಾಗ?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು):

ಅ) ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ 100 ಎಕರೆಗಳಿಗಿಂತ ಹೆಚ್ಚು ನೀರಾವರಿ ಸಾಮರ್ಥ್ಯ ಹೊಂದಿರುವ ಕೆರೆಗಳು, ಅಣೆಕಟ್ಟುಗಳ ಬಗ್ಗೆ ಅವಶ್ಯಕ ದಾಖಲೆಗಳೊಂದಿಗೆ ಸಮೀಕ್ಷೆ ನಡೆಸುತ್ತಿದ್ದು, ಅಂತಹ ಕೆರೆಗಳನ್ನು ಸಣ್ಣ ನೀರಾವರಿ ವ್ಯಾಪ್ತಿಗೆ ಒಳಪಡಿಸಲು ನಿಯಮಾನುಸಾರ ಪರಿಶೀಲಿಸಿ ಕ್ರಮವನ್ನು ಕೈಗೊಳ್ಳಲಾಗುವುದು.

ಆ) ಕೆರೆಗಳ ಸಮೀಕ್ಷೆಯನ್ನು ಮಾಡಿ ಗುರುತಿಸಿಕೊಂಡು ಸಣ್ಣ ನೀರಾವರಿ ವ್ಯಾಪ್ತಿಗೆ ತೆಗೆದುಕೊಂಡು ಇವುಗಳ ದುರಸ್ತಿಗೆ ತೆಗೆದುಕೊಂಡು ಇವುಗಳ ದುರಸ್ತಿಗೆ ಬೇಕಾಗಿರುವ ಹೆಚ್ಚುವರಿ ಅನುದಾನದ ಪ್ರಸ್ತಾವನೆಗೆ ಅನುಮೋದನೆ ಪಡೆದು ದುರಸ್ತಿ ಕಾರ್ಯ ಕೈಗೆತ್ತಿಕೊಳ್ಳಲಾಗುವುದು.